ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ.

ಆ) ಬಂದಿದೆ.

ಇ) ಚಿಕ್ಕಬಳ್ಳಾಪುರ ನಗರದಲ್ಲಿ ಎರಡು ರಾಷ್ಟ್ರೀಯ ಹೆದ್ದಾರಿಗಳು (ರಾ.ಹೆ.–7 ಮತ್ತು ರಾ.ಹೆ.–234) ಹಾದು ಹೋಗುತ್ತಿರುತ್ತದೆ. ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI) ವತಿಯಿಂದ ಚಿಕ್ಕಬಳ್ಳಾಪುರ ನಗರದ ವ್ಯಾಪ್ತಿಯಲ್ಲಿ ಹಾದುಹೋಗುವ ರಾ.ಹೆ.–7ರ ವಾಹನಗಳ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಈಗಾಗಲೇ ಚಿಕ್ಕಬಳ್ಳಾಪುರ ನಗರಕ್ಕೆ ಬೈಪಾಸ್ ರಸ್ತೆಯನ್ನು ನಿರ್ಮಿಸಲಾಗಿದ್ದು, ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ. ಚಿಕ್ಕಬಳ್ಳಾಪುರ ನಗರದ ವ್ಯಾಪ್ತಿಯಲ್ಲಿ ಹಾದುಹೋಗುವ ರಾ.ಹೆ.–234ಕ್ಕೆ ಹೊರ ವಲಯ ರಸ್ತೆ ನಿರ್ಮಿಸಲು ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಈ) ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಊ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಕೃಷಿ ಹವಾಮಾನ ಮೀಟರ್

943 (440) ಶ್ರೀ ಬಂಡೆಪ್ಪ ಕಾಶೆಂಪೂರ್ (ಬೀದರ್ ದಕ್ಷಿಣ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕೃಷಿ ಹವಾಮಾನ ಕಂಡು ಹಿಡಿಯಲು ಮೀಟರ್ ಲಾಜಿಕಲ್ ಇಲಾಖೆ ಜಾರಿಯಲ್ಲಿದೆಯೇ;

ಆ) ಹಾಗಿದ್ದಲ್ಲಿ, ಎಲ್ಲಿ ಹಾಗೂ ಯಾವ ತಾಲ್ಲೂಕುಗಳಲ್ಲಿ ಜಾರಿಯಲ್ಲಿದೆ;

ಇ) ಹಾಗಿದ್ದಲ್ಲಿ, ಸಂಪೂರ್ಣ ಕರ್ನಾಟಕದಲ್ಲಿ ಜಾರಿಯಲ್ಲಿದೆಯೇ;

ಈ) ಹಾಗಿಲ್ಲದಿದ್ದಲ್ಲಿ, ರಾಜ್ಯದ ಎಲ್ಲಾ ಭಾಗಗಳಲ್ಲಿ ತೆರೆಯಲು ಸರ್ಕಾರಕ್ಕಿರುವ ತೊಂದರೆಗಳೇನು?

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿಯವರು) :

ಅ) ರಾಜ್ಯದಲ್ಲಿ ಮೆಟ್ರೋಲಾಜಿಕಲ್ ಇಲಾಖೆ ಇರುವುದಿಲ್ಲ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಕೆ.ಎಸ್.ಎನ್.ಡಿ.ಎಂ.ಸಿ) ಮತ್ತು ಜಲಸಂಪನ್ಮೂಲ ಇಲಾಖೆಗಳು ಜಂಟಿಯಾಗಿ ಕೃಷಿ ಹವಾಮಾನವನ್ನು ಕಂಡು ಹಿಡಿಯುತ್ತವೆ.

ಆ) ರಾಜ್ಯದ ಎಲ್ಲಾ ತಾಲ್ಲೂಕು ಮತ್ತು ಹೋಬಳಿ ಕೇಂದ್ರಗಳಲ್ಲಿ ಚಾರಿಯಲ್ಲಿದೆ.

ಇ) ಹೌದು.

ಈ) 2011–12ನೇ ಸಾಲಿನಲ್ಲಿ ರಾಜ್ಯದ 770 ಗ್ರಾಮ ಪಂಚಾಯಿತಿ ಗಳಲ್ಲಿ ಈ ವ್ಯವಸ್ಥೆಯನ್ನು ಸ್ಥಾಪಿಸಲಾಗಿದ್ದು, ಇನ್ನುಳಿದಂತೆ ಹಂತ ಹಂತವಾಗಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

ವಿಶೇಷ ಅನುದಾನ

944 (441) ಶ್ರೀ ಬಂಡೆಪ್ಪ ಕಾಶೆಂಪೂರ (ಬೀದರ ದಕ್ಷಿಣ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2011–12ನೇ ಸಾಲಿನಲ್ಲಿ ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ವಿಶೇಷ ಪ್ಯಾಕೇಜ್ ಅಡಿಯಲ್ಲಿ ನೀಡಲಾಗಿರುವ ಅನುದಾನವೆಷ್ಟು;

ಆ) ಹಾಗಿದ್ದಲ್ಲಿ ಯಾವ ಕಾಮಗಾರಿಗಳಿಗೆ ಅನುದಾನ ನೀಡಲಾಗಿದೆ (ವಿವರ ನೀಡುವುದು);

ಇ) ಹಾಗಿದ್ದಲ್ಲಿ ಬಿಡುಗಡೆಯಾದ ಅನುದಾನದಲ್ಲಿ ಪೂರ್ಣಗೊಂಡ ಹಾಗೂ ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು? (ವಿವರ ನೀಡುವುದು)

ಈ) ಈ ಕಾಮಗಾರಿಗಳನ್ನು ಯಾವ ಯಾವ ಗುತ್ತಿಗೆದಾರರಿಗೆ ವಹಿಸಲಾಗಿದೆ? (ಕಾಮಗಾರಿ ಹಾಗೂ ಗುತ್ತಿಗೆದಾರರ ವಿವರಗಳನ್ನು ನೀಡುವುದು)